ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 134 ಟಿಇಸಿ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಸಚಿವಾಲಯ-2, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 6-9-2013

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು-560 001.

ಗೆ:

(1) ಕಾರ್ಯನಿರ್ವಾಹಕ ನಿರ್ದೇಶಕರು,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು.

(2)ತಾಂತ್ರಿಕ ಶಿಕ್ಷಣ ನಿರ್ದೇಶಕರು,
ಬೆಂಗಳೂರು.

ಮಾನ್ಯರೆ,

ವಿಷಯ: ಕರ್ನಾಟಕದ ಹಿಂದುಳಿದ ವರ್ಗಗಳ (ಪ್ರವರ್ಗ-1) ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ / ಮರುಪಾವತಿಸುವ ಕುರಿತು.

ಉಲ್ಲೇಖ: ಹಿಂದುಳಿದ ವರ್ಗದ ಇಲಾಖೆಯ ಆದೇಶ ಸಂಖ್ಯೆ: ಸಕಇ 357 ಬಿಎಂಎಸ್ 2013, ದಿ:7.11.2012

-----

ಕರ್ನಾಟಕದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ / ಮರುಪಾವತಿ ಕುರಿತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 357 ಬಿಎಂಎಸ್ 2012 ದಿನಾಂಕ: 07-11-2012ರ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲಾಗಿದೆ. ಪ್ರಸ್ತುತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳ ಕುಟುಂಬದವರ ವಾರ್ಷಿಕ ವರಮಾನವನ್ನು ರೂ.2.00 ಲಕ್ಷಗಳಿಗೆ ನಿಗದಿಪಡಿಸಲಾಗಿರುವಂತೆ ಹಿಂದುಳಿದ ವರ್ಗಗಳ ಪ್ರವರ್ಗ-1ರ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನದ ಮಿತಿಯನ್ನು ರೂ.1.00 ಲಕ್ಷಕ್ಕೆ ಮಿತಿಗೊಳಿಸಿರುವುದನ್ನು ಸಡಿಲಗೊಳಿಸಿ ರೂ.2.00 ಲಕ್ಷಗಳಿಗೆ ಹೆಚ್ಚಿಸಲು ಹಾಗೂ ರೂ.44,500/- ವಾರ್ಷಿಕ ವರಮಾನದ ಮಿತಿಯೊಳಗೆ ಇರುವ ಇತರೆ ಎಲ್ಲಾ ಸಮುದಾಯದ ಕುಟುಂಬದ ವಿದ್ಯಾರ್ಥಿಗಳಿಗೆ ನಿಗದಿತ ಶುಲ್ಕ ಮರು ಪಾವತಿ / ಶುಲ್ಕ ವಿನಾಯಿತಿಗೆ ಪರಿಗಣಿಸುವ ಬಗ್ಗೆ ಆದೇಶ ಹೊರಡಿಸಲಾಗಿದೆ. ಸದರಿ ಆದೇಶದನ್ವಯ ಶಿಕ್ಷಣ ಇಲಾಖೆಯ (ಉನ್ನತ ಶಿಕ್ಷಣ) ತಾಂತ್ರಿಕ ಶಿಕ್ಷಣ ವ್ಯಾಪ್ತಿಯಲ್ಲಿ ಬರುವ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಕೋರ್ಸುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೂ ಪ್ರವೇಶ ಪಡೆಯುವ ಸಮಯದಲ್ಲಿ ಆಯಾಯ ಶಿಕ್ಷಣ ಸಂಸ್ಥೆಗಳು "ಮರುಪಾವತಿಸಬಹುದಾದ ಶುಲ್ಕ" ಎಂದು ನಿಗದಿಪಡಿಸಿರುವ ಶುಲ್ಕಗಳನ್ನು ಪಡೆಯತಕ್ಕದ್ದಲ್ಲವೆಂದು ಹಾಗೂ ಸದರಿ ಶುಲ್ಕವನ್ನು ನಂತರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನೇರವಾಗಿ ಶಿಕ್ಷಣ ಸಂಸ್ಥೆಗಳಿಗೆ ಮರು ಪಾವತಿಸಲಾಗುವುದೆಂದು ತಿಳಿಸಲಾಗಿದೆ.

ಆದುದರಿಂದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಹೊರಡಿಸಿರುವ ಆದೇಶದಲ್ಲಿ ನಮೂದಿಸಲಾಗಿರುವ ಅರ್ಹತೆ ಹಾಗೂ ವಿಧಿಸಲಾಗಿರುವ ಅರ್ಹತೆಗಳಿಗೆ ಅನುಸಾರ ಅರ್ಹ ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ವಿಸ್ತರಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಬಿ.ನಾಗಭೂಷಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).